ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	614
ಸದಸ್ಯರ ಹೆಸರು	:	ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	11.03.2020
ಉತ್ತರಿಸುವ ಸಚಿವರು	:	ಕಂದಾಯ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
(ಅ)	ಕೊಡಗು ಜಿಲ್ಲೆಯಲ್ಲಿ 2018 ರಿಂದೀಚೆಗೆ ವಾಣಿಜ್ಯ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡದಂತೆ ನಿರ್ಬಂಧ ವಿಧಿಸಲಾಗಿತ್ತೇ;	ಹೌದು
(ಆ)	ಹಾಗಿದ್ದಲ್ಲಿ, ಕೊಡಗು ಜಿಲ್ಲೆಯಂತೆ ರಾಜ್ಯದ ಯಾವ ಯಾವ ಜಿಲ್ಲೆಗಳಿಗೆ ಈ ನಿರ್ಬಂಧವನ್ನು ವಿಧಿಸಲಾಗಿತ್ತು; (ಮಾಹಿತಿ ನೀಡುವುದು)	ಕೊಡಗು ಜಿಲ್ಲೆಯನ್ನು ಹೊರತುಪಡಿಸಿ, ಇನ್ನ್ಯಾವುದೇ ಜಿಲ್ಲೆಗಳಲ್ಲಿ ಈ ನಿರ್ಬಂಧವನ್ನು ವಿಧಿಸಿರುವುದಿಲ್ಲ.
(ಇ)	ಈ ನಿರ್ಬಂಧವನ್ನು ಎಷ್ಟು ಎಕರೆ/ಸೆಂಟ್ಸ್ ವರೆಗೆ ಭೂ ಪರಿವರ್ತನೆ ಮಾಡಬಾರದೆಂದು ವಿಧಿಸಲಾಗಿತ್ತು; (ಆದೇಶದ ಪ್ರತಿಯನ್ನು ಒದಗಿಸುವುದು)	ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡುವುದನ್ನು ನಿರ್ಬಂಧಿಸಲಾಗಿತ್ತು. ದಿನಾಂಕ:23.11.2018ರ ಪತ್ರದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ.
(ಈ)	ವಿಧಿಸಿದ ಭೂ ಪರಿವರ್ತನೆಯ ನಿರ್ಬಂಧವನ್ನು ಹಿಂಪಡೆಯಲಾಗಿದೆಯೇ; ಹಾಗಿದ್ದಲ್ಲಿ ವಸತಿ ಮತ್ತು ಇನ್ನಿತರ ಉದ್ದೇಶಗಳಿಗೆ ಎಷ್ಟು ಎಕರೆ ಭೂಪರಿವರ್ತನೆ ಮಾಡಲು ಷರತ್ತು ವಿಧಿಸಲಾಗಿದೆ? (ವಿವರಣೆಯೊಂದಿಗೆ ಆದೇಶದ ಪ್ರತಿಯನ್ನು ಒದಗಿಸುವುದು)	ವಾಸ್ತವ್ಯದ ಉದ್ದೇಶಕ್ಕಾಗಿ ಮನೆ ನಿರ್ಮಿಸುವವರಿಗೆ 15 ರಿಂದ 20 ಸೆಂಟ್ ವಿಸ್ತೀರ್ಣದ ಜಮೀನಿನ ಭೂ ಪರಿವರ್ತನೆಗೆ ಕೆಲವೊಂದು ಷರತ್ತುಗಳೊಂದಿಗೆ ಅವಕಾಶ ಕಲ್ಪಿಸಲಾಗಿದೆ. ದಿನಾಂಕ:08.05.2019ರ ಪತ್ರದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ.

(ಕಡತ ಸಂಖ್ಯೆ:ಕಂಇ 07 ಎಲ್‌ಜಿಓ 2020)

(ಆರ್.ಅಶೋಕ)
ಕಂದಾಯ ಸಚಿವರು.

ಸಂಖ್ಯೆ:ಆರ್‌ಡಿ 24 ಎಲ್‌ಜಿಓ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:23.11.2018

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಇವರಿಗೆ:
ಜಿಲ್ಲಾಧಿಕಾರಿ,
ಕೊಡಗು ಜಿಲ್ಲೆ,
ಮಡಿಕೇರಿ.

ಮಾನ್ಯರೇ,

ವಿಷಯ: ಕೊಡಗು ಜಿಲ್ಲೆಯಲ್ಲಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಭೂ ಪರಿವರ್ತನೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲು ನಿರ್ದೇಶನ ಕೋರಿರುವ ಬಗ್ಗೆ.

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ಭೂಪರಿ/ಮ/27/2018-19 ದಿನಾಂಕ:09.10.2018.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದೆಡೆಗೆ ಗಮನ ಸೆಳೆಯಲಾಗಿದೆ. ಭಾರತೀಯ ಭೂ ವೈಜ್ಞಾನಿಕ ಸರ್ವೇಕ್ಷಣಾ ಇಲಾಖೆಯ ವರದಿಯಲ್ಲಿ ಈ ಕೆಳಕಂಡಂತೆ ತಿಳಿಸಿದೆ:-

> "Although there are numerous reasons for landslides to occur, the main reason for vast devastation in recent landslides in Kodagu are rainfall and the slope modification by human interference. There are not guidelines or landuse regulations to monitor the landuse in the area. The State Govrnment along with State disaster management authority should frame strict guidelines/regulations for the land use in hilly terrains of Western Ghat in general and Kodagu district in particular. The landslide prone areas and buffer zones may be identified separately highlighting what kind of activities can be allowed in these zones and stringent regulations/policies may be formed for landuse managament for sustainable development"

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮಾರ್ಗಸೂಚಿಗಳನ್ನು ಹೊರಡಿಸುವವರಗೆ ಕೊಡಗು ಜಿಲ್ಲೆಯಲ್ಲಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತಿಸುವುದನ್ನು ಸ್ಥಗಿತಗೊಳಿಸುವಂತೆ ಸರ್ಕಾರದ ಹಂತದಲ್ಲಿ ತೀರ್ಮಾನವಾಗಿರುವುದನ್ನು ತಮಗೆ ತಿಳಿಸಲು ನಿರ್ದೇಶಿತಳಾಗಿದ್ದೇನೆ.

ತಮ್ಮ ನಂಬುಗೆಯ

Vimalamma C.

(ವಿಮಲಮ್ಮ.ಸಿ) 23/11/18
ಪೀಠಾಧಿಕಾರಿ,
ಕಂದಾಯ ಇಲಾಖೆ (ಭೂ ಮಂಜೂರಾತಿ-2).

ಸಂಖ್ಯೆ:ಆರ್‌ಡಿ 24 ಎಲ್‌ಜಿಬಿ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:08.05.2019

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

ಇವರಿಗೆ:
ಜಿಲ್ಲಾಧಿಕಾರಿ,
ಕೊಡಗು ಜಿಲ್ಲೆ,
ಮಡಿಕೇರಿ.

ಮಾನ್ಯರೇ,

ವಿಷಯ: ಕೊಡಗು ಜಿಲ್ಲೆಯಲ್ಲಿ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಭೂ ಪರಿವರ್ತನೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲು ನಿರ್ದೇಶನ ಕೋರಿರುವ ಬಗ್ಗೆ.

ಉಲ್ಲೇಖ: (1) ತಮ್ಮ ಪತ್ರ ಸಂಖ್ಯೆ: ಭೂಪರಿ/ಮ/27/2018-19 ದಿನಾಂಕ:11.02.2019.
(2) ಸರ್ಕಾರದ ಪತ್ರ ಸಂಖ್ಯೆ:ಆರ್‌ಡಿ 24 ಎಲ್‌ಜಿಬಿ 2018, ದಿನಾಂಕ:23.11.2018.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ (1)ರ ಪತ್ರದೆಡೆಗೆ ಗಮನ ಸೆಳೆಯಲಾಗಿದೆ. ವಾಸ್ತವ್ಯದ ಉದ್ದೇಶಕ್ಕಾಗಿ ಮನೆ ನಿರ್ಮಿಸುವವರಿಗೆ 15 ರಿಂದ 20 ಸೆಂಟ್ ವಿಸ್ತೀರ್ಣದ ಜಮೀನಿನ ಭೂ ಪರಿವರ್ತನೆಗೆ ತಹಶೀಲ್ದಾರ್, ಉಪವಿಭಾಗಾಧಿಕಾರಿ ಇವರ ಸ್ಥಳ ಪರಿಶೀಲನೆ ವರದಿಯನ್ನು ಆಧರಿಸಿ ಜಿಲ್ಲಾಧಿಕಾರಿಯವರು ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 95 ರಡಿ ಕಲ್ಪಿಸಲಾದ ಅಧಿಕಾರದಂತೆ ಭೂ ಪರಿವರ್ತನೆಗೆ ಆದೇಶ ನೀಡಲು ಈ ಕೆಳಕಂಡ ಅಂಶಗಳ ಪರಿಶೀಲನೆಗೊಳಪಟ್ಟು ಸರ್ಕಾರವು ಅನುಮತಿ ನೀಡಿದೆ ಎಂದು ತಮಗೆ ತಿಳಿಸಲು ನಿರ್ದೇಶಿತಳಾಗಿದ್ದೇನೆ;

(1) ಭಾರತೀಯ ಭೂ ವೈಜ್ಞಾನಿಕ ಸರ್ವೇಕ್ಷಣಾ ಇಲಾಖೆ ರವರು ನೀಡಿರುವ ವರದಿಯಲ್ಲಿನ ಅಂಶದಂತೆ ಕಟ್ಟಡಗಳ ರಚನೆ ಸಂಬಂಧ non-stable area ಇದ್ದಲ್ಲಿ ಭೂ ಪರಿವರ್ತನೆಗೆ ಅವಕಾಶ ನೀಡಬಾರದು.

(2) ನದಿ, ಹಳ್ಳಗಳಿಂದ ಕನಿಷ್ಠ 10 ಮೀಟರ್ ದೂರದಲ್ಲಿರಬೇಕು.

..................................2

(3) ತೀವ್ರತರವಾದ ಇಳಿಜಾರು ಇರುವ ಮತ್ತು ಕಣಿವೆಯಂತಹ ಪ್ರದೇಶಗಳಲ್ಲಿ ಮನೆ ನಿರ್ಮಾಣ ಮಾಡುವುದು ಅಪಾಯಕಾರಿಯಾಗಿರುವ ಹಿನ್ನಲೆಯಲ್ಲಿ ಭೂ ಪರಿವರ್ತನೆಗೆ ಅವಕಾಶ ನೀಡಬಾರದು.

(4) 2018ರ ಮಳೆಗಾಲದಲ್ಲಿ ಭೂ ಕುಸಿತ ಉಂಟಾದ ಜಮೀನಿನಲ್ಲಿ ಮನೆ ನಿರ್ಮಾಣ ಮಾಡುವುದು ಸೂಕ್ತವಲ್ಲದ ಕಾರಣ ಅಂತಹ ಜಮೀನುಗಳಲ್ಲಿ ಭೂ ಪರಿವರ್ತನೆಗೆ ಅವಕಾಶ ನೀಡಬಾರದು.

ತಮ್ಮ ನಂಬುಗೆಯ

Vimalamma C 8/5/19

(ವಿಮಲಮ್ಮ.ಸಿ)

ಜಂಟಿ ನಿರ್ದೇಶಕರು, (?) ಹಿರಿಯ ಅಧಿಕಾರಿ

ಕಂದಾಯ ಇಲಾಖೆ (ಭೂ ಮಂಜೂರಾತಿ-2).